**ಕರ್ನಾಟಕ ಸರ್ಕಾರ**

ಸಂಖ್ಯೆ:ಗ್ರಾಅಪಂರಾ 263 ಜಿಪಸ 2021(ಪಿ-1)

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:29-01-2022.

## ಸುತ್ತೋಲೆ

**ವಿಷಯ:** 15ನೇ ಹಣಕಾಸು ಆಯೋಗದ ಅನುದಾನವನ್ನು ವಿನಿಯೋಗಿಸುವ ಕುರಿತು.

**ಉಲ್ಲೇಖ:** ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪಂರಾ 263 ಜಿಪಸ 2021, ದಿನಾಂಕ:17-11-2021.

******

ಉಲ್ಲೇಖಿತ ಸುತ್ತೋಲೆಯನ್ವಯ ಗ್ರಾಮ, ತಾಲ್ಲೂಕು ಮತ್ತು ಜಿಲ್ಲಾ ಪಂಚಾಯತಿಗಳ ನೈರ್ಮಲ್ಯ ಮತ್ತು ಬಯಲು ಬಹಿರ್ದೆಸೆ ಮುಕ್ತ ಸ್ಥಿತಿಯನ್ನು ಕಾಪಾಡಲು ತೆಗೆದುಕೊಳ್ಳಬಹುದಾದ ಚಟುವಟಿಕೆಗಳಡಿ ಕುಡಿಯುವ ನೀರು ಸರಬರಾಜು ಹಾಗೂ ಬೂದು ನೀರಿನ ಕಾರ್ಯಾಚರಣೆ ಮತ್ತು ನಿರ್ವಹಣೆಗೆ ಸಂಬಂಧಿಸಿದಂತೆ ತಗಲುವ ವಿದ್ಯುತ್ ಬಿಲ್ಲಿನ ಮೊತ್ತವನ್ನು 15ನೇ ಹಣಕಾಸು ಆಯೋಗದ ನಿರ್ಬಂಧಿತ ಅನುದಾನದಡಿ ಪಾವತಿಸುವಂತೆ ಸೂಚಿಸಲಾಗಿರುತ್ತದೆ.

15ನೇ ಹಣಕಾಸು ಆಯೋಗದ ಅನಿರ್ಬಂಧಿತ ಅನುದಾನದ ಕ್ರಿಯಾ ಯೋಜನೆಯಲ್ಲಿ ಶೇ.7ರಷ್ಟು ಮತ್ತು ನಿರ್ಬಂಧಿತ ಅನುದಾನದಲ್ಲಿ ಶೇ.7ರಷ್ಟನ್ನು ನಿಗದಿಪಡಿಸಿ, ಕಡ್ಡಾಯವಾಗಿ ಬಾಕಿ ಇರುವ ವಿದ್ಯುತ್ ಬಿಲ್ಲನ್ನು ವಿದ್ಯುತ್ ಸರಬರಾಜು ಕಂಪನಿಗಳಿಗೆ ಪಾವತಿಸುವುದು.

15ನೇ ಹಣಕಾಸು ಆಯೋಗದ ಅನುದಾನದ ಯೋಜನೆಯಲ್ಲಿ ಬಾಕಿ ಇರುವ ವಿದ್ಯುತ್ ಬಿಲ್ಲು ಪಾವತಿಗಾಗಿ ನಿಗಧಿಪಡಿಸಿದ ಅನುದಾನವನ್ನು ಕಡ್ಡಾಯವಾಗಿ ಇ-ಗ್ರಾಮ ಸ್ವರಾಜ್ ತಂತ್ರಾಂಶದ ಮೂಲಕ ಗ್ರಾಮ ಪಂಚಾಯತಿಯ ESCROW ಖಾತೆಗೆ ವರ್ಗಾವಣೆ ಮಾಡಿ, ಬಾಕಿ ಇರುವ ವಿದ್ಯುತ್ ಬಿಲ್ಲನ್ನು ವಿದ್ಯುತ್ ಸರಬರಾಜು ಕಂಪನಿಗಳಿಗೆ ಪಾವತಿಸುವುದು.

15ನೇ ಹಣಕಾಸು ಆಯೋಗದ ಅನುದಾನದ ಬಳಕೆಗೆ ಸಂಬಂಧಿಸಿದಂತೆ ಗ್ರಾಮ ಪಂಚಾಯತಿಗಳು ಈಗಾಗಲೇ 14ನೇ ಹಣಕಾಸು ಆಯೋಗದ ಅನುದಾನಕ್ಕೆ ಈ ಹಿಂದೆ ತೆರೆಯಲಾಗಿರುವ ಬ್ಯಾಂಕ್ ಖಾತೆಗಳನ್ನೇ 15ನೇ ಹಣಕಾಸು ಆಯೋಗದ ಅನುದಾನಕ್ಕೆ ಮುಂದುವರೆಸುವಂತೆ ಹಾಗೂ 14ನೇ ಹಣಕಾಸು ಆಯೋಗದ ಅನುದಾನಕ್ಕೆ ಮತ್ತು 15ನೇ ಹಣಕಾಸು ಆಯೋಗದ ಅನುದಾನಕ್ಕೆ ಪ್ರತ್ಯೇಕವಾದ ನಗದು ವಹಿಯನ್ನು ನಿರ್ವಹಿಸುವಂತೆ ಮತ್ತು ಸರ್ಕಾರದ ಅನುಮೋದನೆ ಇಲ್ಲದೇ ಯಾವುದೇ ಕಾರಣಕ್ಕೂ ಬ್ಯಾಂಕ್ ಖಾತೆಗಳನ್ನು ಬದಲಾಯಿಸುವುದಾಗಲಿ ಅಥವಾ ಹೊಸ ಖಾತೆ ತೆರೆಯುವುದನ್ನು ನಿಷೇಧಿಸಲಾಗಿರುತ್ತದೆ. ಆದಾಗ್ಯೂ, 15ನೇ ಹಣಕಾಸು ಆಯೋಗದ ಅನುದಾನದ

ಬ್ಯಾಂಕ್ ಖಾತೆಗಳನ್ನು ಬದಲಾಯಿಸಬೇಕಾದ್ದಲ್ಲಿ, ಪಂಚಾಯತ್ ರಾಜ್ ಸಂಸ್ಥೆಗಳು ಸೂಕ್ತ ಕಾರಣದೊಂದಿಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿ, ಅನುಮೋದನೆ ಪಡೆಯತಕ್ಕದ್ದು.

Chetna
(ಚೇತನ. ಎಂ) 29/1/22
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

29/01/22

ಇವರಿಗೆ:

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು(ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ).
3. ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು (ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ).
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

ಪ್ರತಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಕಾರ್ಯದರ್ಶಿರವರ ಮಾಹಿತಿಗಾಗಿ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಹಿರಿಯ ಆಪ್ತ ಕಾರ್ಯದರ್ಶಿರವರ ಮಾಹಿತಿಗಾಗಿ.
4. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯವರ ಆಪ್ತ ಸಹಾಯಕರು, ಕೆ.ಜಿ.ರಸ್ತೆ, ಬೆಂಗಳೂರು.
5. ಸರ್ಕಾರದ ಜಂಟಿ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಸಹಾಯಕರು.
6. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಸಹಾಯಕರು.
7. ವೆಬ್ ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.